English version

Yes. The complainant has complained on 2-6-2009 and 29-6-2009. The DSP, Bagalkot was instructed to enquire into this and send report. His report is awaited. On receipt of report from DSP Bagalkot, action will be taken to provide police protection to the complaint. The complainant has requested 15 days time to furnish some information. BSNL has been requested to provide particulars of the telephone calls made and received from the phone of complainant and as soon as the report from BSNL is received further suitable action will be taken.

1062 ಶ್ರೀ ಅಮರೇಗೌಡ ಲಿಂಗನಗೌಡ ಬಯ್ಯಾಪುರ : ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹೈದ್ರಾಬಾದ್–ಕರ್ನಾಟಕ ಪ್ರದೇಶದ ವ್ಯಾಪ್ತಿಯಲ್ಲಿ ಬರುವ ಕೊಪ್ಪಳ ಜಿಲ್ಲೆಯಲ್ಲಿ ಇರುವ ಒಟ್ಟು ಗ್ರಾಮಾಂತರ ಬಸ್ ಮಾರ್ಗಗಳೆಷ್ಟು;

ಆ) ಹೊಸದಾಗಿ ಬಸ್ ಮಾರ್ಗಗಳನ್ನು ಪ್ರಾರಂಭಿಸಲು ಸರ್ಕಾರವು ಯಾವ ಯಾವ ಕ್ರಮಗಳನ್ನು ತೆಗೆದುಕೊಂಡಿದೆ;

ಇ) ಕುಷ್ಟಗಿ ತಾಲ್ಲೂಕಿನಲ್ಲಿ ಹಾಲಿ ಇರುವ ಬಸ್ ಮಾರ್ಗಗಳು ಎಷ್ಟು;

ಈ) ಬಸ್ ಮಾರ್ಗಗಳನ್ನು ಹೆಚ್ಚಿಸಲು ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿವೆ?

ಶ್ರೀ ಆರ್.ಅಶೋಕ (ಸಾರಿಗೆ ಸಚಿವರು) :

ಅ) 281.

ಆ) ಪ್ರಸಕ್ತ ಸಾಲಿನಲ್ಲಿ ಕೊಪ್ಪಳ ವಿಭಾಗದಲ್ಲಿ 20 ಮಾರ್ಗಗಳನ್ನು ಹೊಸದಾಗಿ ಪ್ರಾರಂಭಿಸಲಾಗಿದೆ. ಮುಂದೆಯೂ ಸಹ ಪ್ರಯಾಣಿಕರ ಬೇಡಿಕೆಗಳಿಗನುಗುಣವಾಗಿ ಹೊಸ ಬಸ್‌ಮಾರ್ಗಗಳನ್ನು ಪ್ರಾರಂಭಿಸಲಾಗುವುದು.

ಇ) 105.

ಈ) ಪ್ರಸಕ್ತ ಸಾಲಿನಲ್ಲಿ ಕುಷ್ಟಗಿ ತಾಲ್ಲೂಕಿನಲ್ಲಿ 6 ಮಾರ್ಗಗಳನ್ನು ಹೊಸದಾಗಿ ಪ್ರಾರಂಭಿಸಲಾಗಿದೆ. ಮುಂದೆಯೂ ಸಹ ಬೇಡಿಕೆಗನುಗುಣವಾಗಿ ಕೋರಿಕೆಯಂತೆ ಹೊಸ ಬಸ್ ಮಾರ್ಗಗಳನ್ನು ಪ್ರಾರಂಭಿಸಲಾಗುವುದು.

976 ಶ್ರೀ ಅಮರೇಶ್(ಮುಳಬಾಗಿಲು) : ಮಾನ್ಯ ನಗರಾಭಿವೃದ್ಧಿ, ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳು ಮತ್ತು ಶಾಸನರಚನೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮುಳಬಾಗಿಲು ಪಟ್ಟಣದಲ್ಲಿ ಒಳಚರಂಡಿ ನಿರ್ಮಾಣ ಕಾಮಗಾರಿಗೆ ಸರ್ಕಾರ ನಿಗಧಿಪಡಿಸಿರುವ ಅಂದಾಜು ಮೊತ್ತವೆಷ್ಟು;

ಆ) ಕಾಮಗಾರಿ ಮುಗಿಯಲು ಸರ್ಕಾರ ನಿಗಧಿಪಡಿಸಿರುವ ಕಾಲಮಿತಿಯೇನು?

ಶ್ರೀ ಎಸ್.ಸುರೇಶ್ ಕುಮಾರ್ (ನಗರಾಭಿವೃದ್ಧಿ, ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳು ಮತ್ತು ಶಾಸನರಚನೆ ಸಚಿವರು) :

ಅ) ರೂ.2115.00 ಲಕ್ಷಗಳು

ಆ) ಈ ಯೋಜನೆಯಡಿಯಲ್ಲಿ ನಿರ್ಮಿಸಬೇಕಾಗಿರುವ ಕೊಳಚೆ ಶುದ್ಧಿಕರಣಗಾರಕ್ಕೆ ಬೇಕಾಗುವ ಒಟ್ಟು 17 ಎಕರೆ ಜಮೀನನ್ನು ಸ್ಥಳೀಯ ಸಂಸ್ಥೆಯು ಮಂಡಳಿಗೆ ಹಸ್ತಾಂತರಿಸಿದ 1 ವರ್ಷದಲ್ಲಿ ಯೋಜನೆಯನ್ನು ಪೂರ್ಣಗೊಳಿಸಲಾಗುವುದು.

977 ಶ್ರೀ ಅಮರೇಶ್(ಮುಳಬಾಗಿಲು) : ಮಾನ್ಯ ನಗರಾಭಿವೃದ್ಧಿ, ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳು ಮತ್ತು ಶಾಸನರಚನೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮುಳಬಾಗಿಲು ಟೌನ್‌ನಲ್ಲಿ 3–4 ದಿನಕೊಮ್ಮೆ ನೀರು ಸರಬರಾಜು ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ದಿನನಿತ್ಯ ನೀರು ಸರಬರಾಜು ಮಾಡಲು ಕ್ರಮ ಕೈಗೊಳ್ಳಲಾಗುವುದೇ;

ಶ್ರೀ ಎಸ್.ಸುರೇಶ್ ಕುಮಾರ್ (ನಗರಾಭಿವೃದ್ಧಿ, ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳು ಮತ್ತು ಶಾಸನರಚನೆ ಸಚಿವರು) :

ಅ) ಬಂದಿದೆ. ಮುಳುಬಾಗಿಲು ಪಟ್ಟಣಕ್ಕೆ ನೀರು ಸರಬರಾಜು ವ್ಯವಸ್ಥೆ ಸಂಪೂರ್ಣವಾಗಿ ಕೊಳವೆ ಬಾವಿಗಳ ಮೇಲೆ ಅವಲಂಬಿತವಾಗಿರುತ್ತದೆ. ಪಟ್ಟಣದಲ್ಲಿ ಒಟ್ಟು 87 ಕೊಳವೆ ಬಾವಿಗಳ ಪೈಕಿ 40 ಕೊಳವೆ ಬಾವಿಗಳ ನೀರು ಮಾತ್ರ ಕುಡಿಯಲು ಯೋಗ್ಯವಿದ್ದು, ಉಳಿದ 47 ಕೊಳವೆ ಬಾವಿಗಳು (ಉಪ್ಪು) ನೀರು ಇತರೆ ಉದ್ದೇಶಗಳಿಗೆ ಬಳಸಲಾಗುತ್ತಿದೆ. ಪ್ರಸ್ತುತ ನೀರಿನ ವರತೆ ಕಡಿಮೆಯಾಗಿ 3 ದಿನಕ್ಕೊಮ್ಮೆ ನೀರು ಸರಬರಾಜು ಮಾಡಲಾಗುತ್ತಿದೆ.